ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1214

ಸದಸ್ಯರ ಹೆಸರು : ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 22-09-2021

ಉತ್ತರಿಸುವ ಸಚಿವರು : ಕಂದಾಯ ಸಚಿವರು

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ಸರ್ಕಾರಿ ಜಮೀನು ಎಷ್ಟು; ಈ ಜಮೀನನ್ನು ಯಾವ ಉದ್ದೇಶಕ್ಕಾಗಿ ಬಳಸಿಕೊಳ್ಳಲಾಗುತ್ತಿದೆ; (ಸಂಪೂರ್ಣ ಮಾಹಿತಿ ನೀಡುವುದು)</td><td>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಸರ್ಕಾರಿ ಜಮೀನುಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ. ಸಂ.</th><th>ತಾಲ್ಲೂಕು</th><th>ವಿಸ್ತೀರ್ಣ [ಎ/ಗುಂ]</th></tr>
<tr><td>1</td><td>ಬೆಂಗಳೂರು ಉತ್ತರ</td><td>1192-12</td></tr>
<tr><td>2</td><td>ಬೆಂಗಳೂರು ದಕ್ಷಿಣ</td><td>5408-00</td></tr>
<tr><td>3</td><td>ಬೆಂಗಳೂರು ಪೂರ್ವ</td><td>7117-25</td></tr>
<tr><td>4</td><td>ಯಲಹಂಕ</td><td>2655-05</td></tr>
<tr><td>5</td><td>ಆನೇಕಲ್</td><td>120-04</td></tr>
<tr><td colspan="2">ಒಟ್ಟು</td><td>16493-06</td></tr>
</table>
ಸದರಿ ವಿಸ್ತೀರ್ಣದಲ್ಲಿ ಸರ್ಕಾರಿ ಕೆರೆ, ಕಟ್ಟೆ, ಕುಂಟೆಗಳು, ರಸ್ತೆ, ಆಸ್ಪತ್ರೆ, ನಿವೇಶನ, ಸ್ಮಶಾನ, ಶಾಲೆ, ಸರ್ಕಾರಿ ಆಟದ ಮೈದಾನ ಹಾಗೂ ವಿವಿಧ ಉದ್ದೇಶಗಳಿಗೆ ಬಳಕೆಯಾಗುತ್ತಿರುತ್ತದೆ.</td></tr>
<tr><td>ಆ)</td><td>ಸರ್ಕಾರಿ ಜಮೀನನ್ನು ಖಾಸಗಿ ವ್ಯಕ್ತಿಗಳಿಗೆ ಪರಭಾರೆ ಮಾಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪರಭಾರೆ ಮಾಡಲು ಸಹಕರಿಸಿದ ಅಧಿಕಾರಿಗಳ ಮೇಲೆ ಸರ್ಕಾರ ಕ್ರಮ ಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ; ಸದರಿ ಪ್ರಕರಣದಲ್ಲಿ ಭಾಗಿಯಾದ ಎಷ್ಟು ಅಧಿಕಾರಿಗಳನ್ನು ಅಮಾನತ್ತು ಮಾಡಲಾಗಿದೆ;</td><td>ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಸರ್ಕಾರಿ ಜಮೀನನ್ನು ಖಾಸಗಿ ವ್ಯಕ್ತಿಗಳಿಗೆ ಪರಭಾರೆ ಮಾಡಿರುವ ಪ್ರಕರಣಗಳು ಗಮನಕ್ಕೆ ಬಂದಿರುತ್ತದೆ.

ಈ ಸಂಬಂಧ 02 ಅಧಿಕಾರಿಗಳು ಮತ್ತು 03 ನೌಕರರ ವಿರುದ್ಧ ಕ್ರಮವಹಿಸಲಾಗಿರುತ್ತದೆ.

ಸರ್ಕಾರಿ ಜಮೀನನ್ನು ಖಾಸಗಿ ವ್ಯಕ್ತಿಗಳಿಗೆ ಪರಭಾರೆ ಮಾಡಲು ಸಹಕರಿಸಿರುವ ಅಧಿಕಾರಿ/ನೌಕರರ ವಿರುದ್ಧ ಕ್ರಮ ಕೈಗೊಳ್ಳಲಾಗಿದ್ದು, ವಿವರ ಈ ಕೆಳಕಂಡಂತೆ ಇರುತ್ತದೆ.

1.ಯಲಹಂಕ ತಾಲ್ಲೂಕು, ಜಾಲ ಹೋಬಳಿ, ಹುಣಸೇಮಾರನಹಳ್ಳಿ ಗ್ರಾಮದ ಸ.ನಂ. 184 ರ ಸರ್ಕಾರಿ ಜಮೀನಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಒಬ್ಬ ಅಧಿಕಾರಿ</td></tr>
</table>

<table>
<tr><td></td><td></td><td>ಮತ್ತು ಒಬ್ಬ ನೌಕರರ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಪ್ರಾರಂಭಿಸಲಾಗಿರುತ್ತದೆ.

2.ಯಲಹಂಕ ತಾಲ್ಲೂಕು, ಜಾಲ ಹೋಬಳಿ, ಶೆಟ್ಟಿಗೆರೆ ಗ್ರಾಮದ ಸ.ನಂ. 97 ರಲ್ಲಿ 17-35 ಎಕರೆ/ಗುಂಟೆ ಸರ್ಕಾರಿ ಜಮೀನಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಒಬ್ಬ ಅಧಿಕಾರಿ ಮತ್ತು ಇಬ್ಬರು ನೌಕರರ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಪ್ರಾರಂಭಿಸಲಾಗಿರುತ್ತದೆ.</td></tr>
<tr><td>ಇ)</td><td>ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವ ಅಧಿಕಾರಿಗಳನ್ನು ವಜಾ ಮಾಡಲು ವಿಳಂಬವಾಗಲು ಕಾರಣವೇನು;</td><td>ಇಂತಹ ಪ್ರಕರಣದಲ್ಲಿ ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ.</td></tr>
<tr><td>ಈ)</td><td>ಎಷ್ಟು ವಿಸ್ತೀರ್ಣದ ಜಮೀನುಗಳು ಅತಿಕ್ರಮಿಸಲ್ಪಟ್ಟಿವೆ; (ವಾರ್ಡ್ ವಾರು ಮಾಹಿತಿ ನೀಡುವುದು)</td><td>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅತಿಕ್ರಮಿಸಲ್ಪಟ್ಟ ಜಮೀನುಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ. ಸಂ.</th><th>ತಾಲ್ಲೂಕು</th><th>ವಿಸ್ತೀರ್ಣ [ಎ/ಗುಂ]</th></tr>
<tr><td>1</td><td>ಬೆಂಗಳೂರು ಉತ್ತರ</td><td>0-00</td></tr>
<tr><td>2</td><td>ಬೆಂಗಳೂರು ದಕ್ಷಿಣ</td><td>0-00</td></tr>
<tr><td>3</td><td>ಬೆಂಗಳೂರು ಪೂರ್ವ</td><td>744-29</td></tr>
<tr><td>4</td><td>ಯಲಹಂಕ</td><td>21-19</td></tr>
<tr><td>5</td><td>ಆನೇಕಲ್</td><td>0-00</td></tr>
<tr><td colspan="2">ಒಟ್ಟು</td><td>766-08</td></tr>
</table></td></tr>
<tr><td>ಉ)</td><td>ಅತಿಕ್ರಮಿಸಲ್ಪಟ್ಟ ಸರ್ಕಾರಿ ಸ್ವತ್ತುಗಳನ್ನು ಮರಳಿ ಪಡೆಯಲು ಸರ್ಕಾರದ ಕ್ರಮವೇನು?</td><td>ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಬೃಹತ್ ಬೆಂಗಳೂರು ಪಾಲಿಕೆಯ ವ್ಯಾಪ್ತಿಯಲ್ಲಿ ಅತಿಕ್ರಮಿಸಲ್ಪಟ್ಟ ಸರ್ಕಾರಿ ಸ್ವತ್ತುಗಳನ್ನು ಸರ್ಕಾರದ ವಶಕ್ಕೆ ಪಡೆದು, ನಿಯಮಾನುಸಾರ ಕ್ರಮ ಕೈಗೊಂಡು, ಒತ್ತುವರಿಯಿಂದ ತೆರವುಗೊಳಿಸಿದ ಸರ್ಕಾರದ ಜಮೀನುಗಳನ್ನು ನಿರ್ಮಿತಿ ಕೇಂದ್ರರವರ ಮುಖಾಂತರ ತಂತಿ ಬೇಲಿ ನಿರ್ಮಿಸಿ ಸಂರಕ್ಷಿಸಲಾಗುವುದು.</td></tr>
</table>

ಸಂಖ್ಯೆ: ಆರ್‌ಡಿ 174 ಎಲ್‌ಜಿಕ್ಯೂ 2021 (ಇ)

(ಆರ್.ಅಶೋಕ)
ಕಂದಾಯ ಸಚಿವರು